ಪ್ರಶ್ನೋತ್ತರ

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು.

ವಿಷಯ:- ಕಾಪು ವಿಧಾನ ಸಭಾ ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತ್ ಅಧೀನದ ಕಾಮಗಾರಿಗಳ ಸ್ಥಗಿತ.

1(14)

ಶ್ರೀ ವಸಂತ ವಿ. ಸಾಲಿಯಾನ (ಕಾಪು):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

1. ಕಾಪು ವಿಧಾನ ಸಭಾ ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತ್ ಅಧೀನದ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ;
2. ಹಾಗಿದ್ದರೆ (ಸ್ಥಗಿತಗೊಂಡಿದ್ದರೆ) ಅದಕ್ಕೆ ಕಾರಣಗಳೇನು?

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):-

1. ಇಲ್ಲ.
2. ಉದ್ಭವಿಸುವುದಿಲ್ಲ.

ಶ್ರೀ ವಸಂತ ವಿ. ಸಾಲಿಯಾನ:- ತಮ್ಮ ಉತ್ತರದಲ್ಲಿ ಒಂದನೇ ಪ್ರಶ್ನೆಗೆ ಇಲ್ಲ, ಎರಡನೇ ಪ್ರಶ್ನೆಗೆ ಉದ್ಭವಿಸುವುದಿಲ್ಲ ಎಂದು ಹೇಳಿದ್ದೀರಿ, ಈ ಸಂದರ್ಭದಲ್ಲಿ ಕೆಲವು ವಿಚಾರಗಳನ್ನು ತಮ್ಮ ಗಮನಕ್ಕೆ ತರಬಯಸುತ್ತೇನೆ. ಮೊದಲನೆಯದಾಗಿ ಪಂಚಾಯತಿ ಕಾಮಗಾರಿಗಳು ಎಂದು ಏನು ಇವೆ ಅದು ಗ್ರಾಮ ಪಂಚಾಯಿತಿ ಕಾಮಗಾರಿಗಳು, ತಾಲ್ಲೂಕು ಪಂಚಾಯಿತಿ ಕಾಮಗಾರಿಗಳು, ಜಿಲ್ಲಾ ಪಂಚಾಯಿತಿ ಕಾಮಗಾರಿಗಳು ಮತ್ತು ಮಲೆನಾಡು ಅಭಿವೃದ್ಧಿ ಕಾಮಗಾರಿಗಳು ಎಂದು. ನನ್ನ ಕ್ಷೇತ್ರದಲ್ಲಿ ಸುಮಾರು ಎರಡು ವರ್ಷಗಳಲ್ಲಿ ಈ ಕಾಮಗಾರಿಗಳು ಸ್ಥಗಿತಗೊಂಡಿವೆ. ಇದರ ಬಗ್ಗೆ ನಾನು ಸಂಬಂಧಪಟ್ಟವರಿಗೆ ತಿಳಿಸಿದ್ದೇನೆ. ಮೇಲಾಗಿ ಪಂಚಾಯಿತಿ ಕಾಮಗಾರಿಗಳಿಗೆ ಪ್ಲಾನ್ ಮತ್ತು ಎಸ್ಟಿಮೇಟ್ ಮಾಡುತ್ತಿಲ್ಲ, ಮತ್ತೆ ಸಾಮಗ್ರಿಗಳ ಕೊರತೆ ಅಂದರೆ ಸಿಮೆಂಟು, ಸ್ಟೀಲು ಡಾಂಬರ್ ಇದನ್ನೆಲ್ಲಾ ಒದಗಿಸದೇ ಅನೇಕ ಕಾಮಗಾರಿಗಳು ಎರಡು ವರ್ಷದಿಂದ ಹಾಗೆ ಇದೆ. ಆ ಸಣ್ಣ ಸಣ್ಣ ನೀರಿನ ಕಾಮಗಾರಿಗಳಿಗೆ, ಅಣೆಕಟ್ಟುಗಳ ಕಾಮಗಾರಿಗಳಿಗೆ, ಸಣ್ಣ ಸೇತುವೆಗಳ ಕಾಮಗಾರಿಗಳಿಗೆ, ಮಂಜೂರಾತಿಯಾಗಿ ಹಣ ಒದಿಗಿಸಿಕೊಟ್ಟರೂ ಸಹ ಅದಕ್ಕೆ ಪ್ಲಾನ್ ಎಸ್ಟಿಮೇಟ್ ಕೊರತೆ ಮತ್ತು ಸಾಮಗ್ರಿಗಳ ಕೊರತೆಯಿಂದಾಗಿ ಅವು ಸ್ಥಗಿತಕೊಂಡಿವೆ. ತಮಗೆ ಅಧಿಕಾರಿಗಳು ತಪ್ಪು ಮಾಹಿತಿ ಕೊಟ್ಟಿದ್ದಾರೆ. ದಯವಿಟ್ಟು ಇದರ ಬಗ್ಗೆ ಚಿಂತನೆ ಮಾಡಿ ಅಧಿಕಾರಿಗಳಿಗೆ ಸೂಕ್ತ ಆದೇಶ ಕೊಟ್ಟು ಈ ಕಾಮಗಾರಿಗಳನ್ನು ಸಂಪೂರ್ಣಗೊಳಿಸುವ ರೀತಿಯಲ್ಲಿ ಕ್ರಮ ಕೈಗೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ಎಂ.ಪಿ. ಪ್ರಕಾಶ್:- ತಾವು ಕೇಳಿದಂಥ ಪ್ರಶ್ನೆಗೆ ಇಲ್ಲಿ ಪಶ್ಚಿಮಘಟ್ಟ ಅಭಿವೃದ್ಧಿ ಯೋಜನೆ, ಉದ್ಯೋಗ ಭರವಸೆ ಯೋಜನೆ, ಮಲೆನಾಡು ಗ್ರಾಮೀಣ ರಸ್ತೆ ಮತ್ತು ಸೇತುವೆ ಯೋಜನೆ, ತಾಲ್ಲೂಕು ಪಂಚಾಯಿತಿ ಯೋಜನೆ, ರಾಷ್ಟ್ರೀಯ ನೀರು ಸರಬರಾಜು ಯೋಜನೆ

ಮುಂತಾದ ವಿವಿಧ ಕಾಮಗಾರಿಗಳಲ್ಲಿ ಅನೇಕ ಕೆಲಸಗಳು ಮುಕ್ತಾಯವಾಗಿವೆ. ಆ ಬಗ್ಗೆ ನನಗೆ ವಿವರವಾದ ಪಟ್ಟಿ ಬಂದಿದೆ. ಅದನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡುತ್ತೇನೆ. ಉಳಿದ ಕಾಮಗಾರಿಗಳ ಬಗ್ಗೆ ತಮ್ಮ ಜೊತೆ ಮಾತನಾಡಿ ಅವುಗಳನ್ನೂ ಕೂಡ ಮಾಡಿಕೊಡುತ್ತೇನೆ.

ಅಧ್ಯಕ್ಷರು:- ಅದು ನಿಮ್ಮ ಕ್ಷೇತ್ರಕ್ಕೆ ಸಂಬಂಧಪಟ್ಟದ್ದು; ಮಂತ್ರಿಗಳು ಅದನ್ನು ಮಾಡಿಕೊಡುತ್ತಾರೆ, ತೊಂದರೆ ಏನೂ ಇಲ್ಲ.

ವಿಷಯ:- ಕೊರಟಗೆರೆ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರ ಕೊರತೆ.

2(255)

ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ):- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಕೊರಟಗೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳು ಮತ್ತು ತರಗತಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರುಗಳಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಶಿಕ್ಷಕರುಗಳ ಕೊರತೆಯನ್ನು ತುಂಬಲು ಸರ್ಕಾರ ಕ್ರಮ ತೆಗೆದು ಕೊಳ್ಳುವುದೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):-

ಅ)

ಶಾಲೆಗಳ ವಿವರ	ಮಂಜೂರಾದ ಹುದ್ದೆಗಳು	ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು	ಮಕ್ಕಳ ಸಂಖ್ಯೆ
ಸರ್ಕಾರಿ ಮಾದರಿ ಬಾಲಕರ ಪ್ರಾಥಮಿಕ ಶಾಲೆ	7	7	219
ಸರ್ಕಾರಿ ಬಾಲಕಿಯರ ಪ್ರಾಥಮಿಕ ಶಾಲೆ	12	11	207
ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೋಟೆ	6	6	242
ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮೈನ್	10	10	271

ಆ) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೋಟೆ, ಹೊರತು ಪಡಿಸಿ ಉಳಿದ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದಿಲ್ಲ. ಶಿಕ್ಷಕರ ಕೊರತೆ ತುಂಬಲು ಕ್ರಮ ತೆಗೆದುಕೊಳ್ಳಲಾಗುವುದು.